ಮೈಸೂರ ಗೆಜಿಟ್.

ಸಂ. 44.] ಸರ್ಕಾರದಿಂದ ಪ್ರಾಯಿಷ್ ಆದ್ದು. [ಸಂ. 25.

ಬೆಂಗಳೂರು, ಗುರುವಾರ, ಜೂನ್ ತಾ|| 24, ಸನ್ 1909.

II ನೆ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫೈನಾನ್ಷಿಯಲ್ ಇಲಾಖಾ.

ತಾರೀಖು 26ನೆ ಫೆಬ್ರವರಿ 1909.

1909ನೆ ಇಸವಿ ಏಪ್ರೆಲ್ 1ನೆ ತಾರೀಖು ಲಾಗಾಯಿತು 1909ನೆ ಇಸವಿ ಜೂನ್ 30ರವರಿಗೆ ಕೆಳಗೆ ನಮೂದಿಸಿರುವ ಖಜಾನೆಗಳ ಮೇಲೆ ಹುಂಡಿಗಳಿಗೆ (Supply Bills) ಅಪ್ಲಿಕೇಷ್ಣಗಳನ್ನು ಮೈಸೂರು ಸೀನಿಯು ಶ್ರೀವರ್ ಮಹಾರಾಜರವರ ಸರ್ಕಾರದ ಕಂಟ್ರೋಲರು ತೆಗೆದುಕೊಳ್ಳುತ್ತಾರೆ. ಪ್ರತಿಯೊಂದು ಅಪ್ಲಿಕೇಷ್ಣನಲ್ಲಿಯೂ ಈ ಕೆಳಗೆ ತೋರಿಸಿರುವ ವಿವರಗಳು ಇರಬೇಕು.

1. ಹುಂಡಿ ಮೊಬಲಗು.
2. ಹಣ ಪಾವತಿಯಾಗಬೇಕಾದ ಖಜಾನೆಯ ಹೆಸರು.
3. ಹುಂಡಿಗೆ ಅಪ್ಲಿಕೇಷ್ಣ ಹಾಕುವವರ ಹೆಸರು ಮತ್ತು ವಿಳಾಸ.

ಮತ್ತು

2. 500 ರೂಪಾಯಿಗಳಿಗಿಂತ ಕಡಿಮೆ ಮೊಬಲಗಿಗೆ ಹುಂಡಿಯು ಕೊಡಲ್ಪಡುವದಿಲ್ಲ.

3. ಅಪ್ಲಿಕೇಷನನ್ನು ಅಂಗೀಕರಿಸುವ ಪಕ್ಷದಲ್ಲಿ ಆ ವಿಚಾರವು ಅಪ್ಲಿಕೇಷ್ಣ ಹಾಕಿರುವವರಿಗೆ ತಿಳಿಸಲ್ಪಡುವದಲ್ಲದೆ, ಸ್ಟೇಟ್ ಹುಜೂರು ಟ್ರೆಜರಿ ಆಫಿಸರಿಗೆ ಹುಂಡಿಯ ಮೊಬಲಗನ್ನು ಮತ್ತು ಕೆಳಗೆ ನಮೂದಿಸಿರುವ ದರದಮೇರೆ ಕಮಿಷನನ್ನೂ ತೆಗದು ಕ್ಕೊಂಡು ಹುಂಡಿಯನ್ನು ಕೊಡುವದಕ್ಕೆ ಅಧಿಕಾರವು ಕೊಡಲ್ಪಡುತ್ತದೆ.

ಹುಂಡಿ ಕೊಡುವ ಖಜಾನೆ ಹೆಸರು.	ಹಣ ಪಾವತಿಯಾಗಬೇಕಾದ ಖಜಾನೆ ಹೆಸರು.	ಕಮಿಷ್ಣ ದರ.
ಸ್ಟೇಟ್ ಹುಜೂರ್.	ಕೋಲಾರ. ತುಮಕೂರು. ಶಿವಮೊಗ್ಗ. ಕಡೂರು. ಚಿತ್ರದುರ್ಗ. ಮೈಸೂರು. ಹಾಸನ.	ಶೇಕಡ $\frac{1}{16}$

ಜೆ. ಎಸ್. ಚಕ್ರವರ್ತಿ,
ಕಂಟ್ರೋಲರ್.